ಇ) ಇಲ್ಲ. ಆದರೆ ರಾಜ್ಯ ಸರ್ಕಾರ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಬಡ್ಡಿ ಸಹಾಯಧನ ಯೋಜನೆಯನ್ನು ರೂಪಿಸುವ ಕಾರ್ಯಕ್ರಮ ಹಮ್ಮಿಕೊಂಡಿದೆ.

ಖಾಸಗಿ ವೈದ್ಯಕೀಯ ಮಹಾ ವಿದ್ಯಾಲಯಗಳಿಗೆ ಪ್ರವೇಶಾವಕಾಶ

೧೪೧. ಶ್ರೀ ಪಿ.ಜಿ.ಆರ್. ಸಿಂಧ್ಯಾ (ಕನಕಪುರ).—ಮಾನ್ಯ ಆರೋಗ್ಯ, ಕುಟುಂಬ ಕಲ್ಯಾಣ ಹಾಗೂ ಸಹಕಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ೧೯೮೯–೯೦ನೇ ಸಾಲಿನಲ್ಲಿ ಸರ್ಕಾರಿ ಮತ್ತು ಖಾಸಗಿ ಮೆಡಿಕಲ್ ಕಾಲೇಜುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆಯನ್ನು ಸರ್ಕಾರ ನಿರ್ಧರಿಸಿತ್ತೆ ?

ಆ) ನಿರ್ಧರಿಸಿದ್ದರೆ ಕಾಲೇಜುವಾರು ಪ್ರವೇಶ ಸಂಖ್ಯೆಗಳ ವಿವರವೊದಗಿಸುವುದು ?

ಇ) ಈ ಸಂಖ್ಯೆಯನ್ನು ಹಿಂದಿನ ಸಾಲಿಗಿಂತ ಹೆಚ್ಚಿಸಲಾಗಿದೆಯೇ ? ಹೆಚ್ಚಿಸಿದ್ದರೆ ಅದರ ಸಂಖ್ಯೆ ಎಷ್ಟು ?

ಈ) ಈ ನಿರ್ಧಾರ ಮಾಡಲು ನಿರ್ದರಿಸಿದಾಗ ನಿಯಮಗಳನ್ನು ಪಾಲಿಸಲಾಗಿದೆಯೇ ?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಕುಟುಂಬ ಕಲ್ಯಾಣ ಮತ್ತು ಸಹಕಾರ ಸಚಿವೆಯವರು).—

		ಪ್ರವೇಶ ಸಂಖ್ಯೆ
ಅ)	ಸರ್ಕಾರಿ ವೈದ್ಯಕೀಯ ಕಾಲೇಜುಗಳು	
೧)	ಬೆಂಗಳೂರು ವೈದ್ಯಕೀಯ ಕಾಲೇಜು, ಬೆಂಗಳೂರು	೨೦೦
೨)	ಮೈಸೂರು ವೈದ್ಯಕೀಯ ಕಾಲೇಜು, ಮೈಸೂರು	೧೭೫
೩)	ಕರ್ನಾಟಕ ವೈದ್ಯಕೀಯ ಕಾಲೇಜು, ಹುಬ್ಬಳ್ಳಿ	೧೩೦
೪)	ಬಳ್ಳಾರಿ ವೈದ್ಯಕೀಯ ಕಾಲೇಜು, ಬಳ್ಳಾರಿ	೧೩೦
ಆ)	ಖಾಸಗಿ ವೈದ್ಯಕೀಯ ಕಾಲೇಜುಗಳು	
೧)	ಕಸ್ತೂರಬಾ ವೈದ್ಯಕೀಯ ಕಾಲೇಜು, ಮಂಗಳೂರು	೨೫೦
	ಕಸ್ತೂರಬಾ ವೈದ್ಯಕೀಯ ಕಾಲೇಜು, ಮಾಣಿಪಾಲ	೨೫೦
೨)	ಸೆಂಟ್ ಜಾನ್ಸ್ ವೈದಕೀಯ ಕಾಲೇಜು, ಬೆಂಗಳೂರು	೬೦
೩)	ಜೆ. ಎನ್. ವೈದ್ಯಕೀಯ ಕಾಲೇಜು, ಬೆಳಗಾಂ	೧೭೫
೪)	ಎಂ. ಆರ್. ವೈದ್ಯಕೀಯ ಕಾಲೇಜು, ಗುಲ್ಬರ್ಗ	೧೫೦
೫)	ಜೆ.ಜೆ.ಎಂ. ವೈದ್ಯಕೀಯ ಕಾಲೇಜು, ದಾವಣಗೆರೆ	೨೫೦
೬)	ಎಂ.ಎಸ್. ರಾಮಯ್ಯ ವೈದ್ಯಕೀಯ ಕಾಲೇಜು, ಬೆಂಗಳೂರು	೧೦೦
೭)	ಕೆಂಪೇಗೌಡ ವೈದ್ಯಕೀಯ ಕಾಲೇಜು, ಬೆಂಗಳೂರು	೫೦
೮)	ಡಾ. ಬಿ.ಆರ್. ಅಂಬೇಡ್ಕರ್ ವೈದ್ಯಕೀಯ ಕಾಲೇಜು, ಬೆಂಗಳೂರು	೫೦
೯)	ಆಲ್ ಅಮೀನ್ ವೈದ್ಯಕೀಯ ಕಾಲೇಜು, ಬಿಜಾಪುರ	೧೨೦
೧೦)	ಜೆ.ಎಸ್.ಎಸ್. ವೈದ್ಯಕೀಯ ಕಾಲೇಜು, ಮೈಸೂರು	೨೦೦
೧೧)	ಆದಿಚುಂಚನಗಿರಿ ವೈದ್ಯಕೀಯ ಕಾಲೇಜು, ಬೆಳ್ಳೂರು	೧೫೦
೧೨)	ಬಿಎಲ್‌ಡಿಇಎ ವೈದ್ಯಕೀಯ ಕಾಲೇಜು, ಬಿಜಾಪುರ	೧೩೦
೧೩)	ಶ್ರೀ ದೇವರಾಜ ಅರಸ್ ವೈದ್ಯಕೀಯ ಕಾಲೇಜು, ತಮಕ, ಕೋಲಾರ	೧೩೦
೧೪)	ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜು, ತುಮಕೂರು	೧೫೦

ಆ) ಜೆಎಸ್‌ಎಸ್ ವೈದ್ಯಕೀಯ ಮಹಾ ವಿದ್ಯಾಲಯಕ್ಕೆ ಮಾತ್ರ ೫೦ ಸ್ಥಾನಗಳನ್ನು ವಿಶ್ವವಿದ್ಯಾನಿಲಯದ ಶಿಫಾರಸ್ಸಿನ ಮೇರೆಗೆ ಹೆಚ್ಚಿಸಲಾಗಿದೆ.

ಈ) ವಿಶ್ವವಿದ್ಯಾನಿಲಯಗಳ ಶಿಫಾರಸ್ಸಿನ ಮೇಲೆ ಸ್ಥಾನಗಳನ್ನು ನಿರ್ಧರಿಸಲಾಗಿದೆ.